**ಪ್ರಧಾನ ಸಿವಿಲ್ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು, ಮೈಸೂರು ಜಿಲ್ಲೆ.**

**ಸಿ.ಸಿ.ನಂ. 1388/2019**

| | | |
|---|---|---|
| ಸಾಕ್ಷಿದಾರರ ಹೆಸರು | : | ಮಲ್ಲು ಎಸ್ |
| ತಂದೆಯ ಹೆಸರು | : | ಸಿದ್ದೇಗೌಡ |
| ವಯಸ್ಸು | : | 50 ವರ್ಷ |
| ಉದ್ಯೋಗ | : | ಸಹಾಯಕ ಆರಕ್ಷಕ ಉಪನಿರೀಕ್ಷಕರು, ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆ |
| ವಾಸಸ್ಥಳ | : | ನಂಜನಗೂಡು ಟೌನ್. |

**ಸಾಕ್ಷಿಯನ್ನು ದಿನಾಂಕಃ 09.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸ. ಸ. ಅ. ರವರಿಂದಃ**

ನಾನು 2016 ರಿಂದ 2022 ರವರೆಗೆ ನಂಜನಗೂಡು ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ 17.03.2019 ರಂದು ಮಧ್ಯಾಹ್ನ 3.45 ಗಂಟೆ ಸಮಯದಲ್ಲಿ ಅಂಬಳೆ ಗ್ರಾಮದಲ್ಲಿ ಆರೋಪಿ ತನ್ನ ಮನೆಯ ಮುಂಭಾಗದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿದ್ದಾರೆಂದು ಚಾಸಾ-1 ರವರಿಗೆ ಮಾಹಿತಿ ಬಂದಿದ್ದು, ಅದರಂತೆ ಚಾಸಾ-1 ರವರು ನಮ್ಮ ಮೂಲಕ ಪಂಚರನ್ನು ಠಾಣೆಗೆ ಬರಮಾಡಿಕೊಂಡು ನಾನು, ಚಾಸಾ-2, 3, 5, 7 ಮತ್ತು 8 ರವರು ಇಲಾಖಾ ವಾಹನದಲ್ಲಿ ಸಂಜೆ 4.30 ಗಂಟೆಗೆ ಅಂಬಳೆ ಗ್ರಾಮಕ್ಕೆ ಹೋಗಿ ವಾಹನವನ್ನು ಮರೆಯಾಗಿ ನಿಲ್ಲಿಸಿ ನೋಡಿದಾಗ ಆರೋಪಿ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ 90 ಎಂ ಎಲ್ ನ 50 ವಿಂಡ್ಸರ್ ಡಿಲಕ್ಸ್ ವಿಸ್ಕಿಯ ಮದ್ಯದ ಪೌಚ್ ಗಳನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದರು. ನಂತರ ಪಂಚರ ಸಮಕ್ಷಮ

ದಾಳಿ ಮಾಡಿ ಆರೋಪಿಯನ್ನು ಹಿಡಿದು ವಿಚಾರಿಸಿದಾಗ ತನಗೆ ಯಾವುದೇ ರಹದಾರಿ ಇರುವುದಿಲ್ಲವೆಂದು ಹೇಳಿರುತ್ತಾರೆ ಮತ್ತು ಸದರಿ ಮಧ್ಯದ ಪೌಚ್ ಗಳನ್ನು ಹುಲ್ಲಹಳ್ಳಿಯ ಚಾಮುಂಡೇಶ್ವರಿ ವೈನ್ಸ್ ಸ್ಟೋರ್ ನಿಂದ ತಂದಿರುವುದಾಗಿ ತಿಳಿಸಿರುತ್ತಾರೆ. ನಂತರ ಎಲ್ಲಾ ಮಧ್ಯದ ಪೌಚುಗಳನ್ನು ಬಿಳಿ ಬಟ್ಟೆಯಿಂದ ಸುತ್ತಿ M ಎಂಬ ಅಕ್ಷರದಿಂದ ಸೀಲ್ ಮಾಡಿ ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲ ಮತ್ತು ಮಧ್ಯದ ಪೌಚುಗಳನ್ನು ವಶಪಡಿಸಿಕೊಂಡು ಸ್ಥಳದಲ್ಲಿ ಪಂಚರ ಸಮಕ್ಷಮ ಮಹಜರ್ ತಯಾರಿಸಿರುತ್ತೇವೆ. ನಾವು ವಶಪಡಿಸಿಕೊಂಡ ಮಧ್ಯದ ಪೌಚುಗಳನ್ನು ನೋಡಿದರೆ ಗುರುತಿಸುತ್ತೇನೆ. ಸಾಕ್ಷಿಯು ನ್ಯಾಯಾಲಯದಲ್ಲಿರುವ ಮುದ್ದೆ ಮಾಲು-1 ರಿಂದ 50 ನ್ನು ನೋಡಿ ಗುರುತಿಸಿರುತ್ತಾರೆ. ನಂತರ ಆರೋಪಿ ಮತ್ತು ವಶಪಡಿಸಿಕೊಂಡ ಸ್ವತ್ತು ಸಮೇತ ಸಂಜೆ 6.30 ಗಂಟೆಗೆ ಠಾಣೆಗೆ ಬಂದು ಚಾಸಾ-1 ರವರು ಸ್ವ-ವರದಿ ತಯಾರಿಸಿ ಚಾಸಾ-11 ರವರಿಗೆ ಸಲ್ಲಿಸಿರುತ್ತಾರೆ. ನಾನು ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ಆರೋಪಿ ಈ ದಿನ ನ್ಯಾಯಾಲಯದಲ್ಲಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ.ಎಸ್.ಕೆ, ವಕೀಲರಿಂದಃ**

ಪಂಚರು ತಮ್ಮ ಕೆಲಸದ ನಿಮಿತ್ತ ಮಧ್ಯಾಹ್ನ 3.00 ಗಂಟೆಗೆ ಪೊಲೀಸ್ ಠಾಣೆಗೆ ಬಂದಿದ್ದರು. ನಾನು ಹೇಳಿದಂತೆ ಯಾವುದೇ ಪಂಚರು ಠಾಣೆಗೆ ಬಂದಿಲ್ಲ ಮತ್ತು ನಾವು ಯಾವುದೇ ಸ್ಥಳಕ್ಕೆ ಹೋಗಿ ದಾಳಿ ಮಾಡಿಲ್ಲ ಎಂದರೆ ಸರಿಯಲ್ಲ. ಆರೋಪಿ ಯಾವುದೇ ಟೆಟ್ರಾ ಪ್ಯಾಕೇಟ್ ಗಳನ್ನು ಸ್ವಾಧೀನ ಮಾಡಿ ಮಾರಾಟ ಮಾಡುತ್ತಿರಲಿಲ್ಲ ಎಂದರೆ ಸರಿಯಲ್ಲ. ನಾನು ಕೂಡ ಸ್ಥಳಕ್ಕೆ ಹೋಗಿಲ್ಲ ಎಂದರೆ ಸರಿಯಲ್ಲ. ಸ್ಥಳದಲ್ಲಿ ನಾವು ಯಾವುದೇ ಮಹಜರ್ ಕ್ರಮ ಜರುಗಿಸಿಲ್ಲ ಎಂದರೆ ಸರಿಯಲ್ಲ. ನಮ್ಮ ಠಾಣಾ ಅಂಕಿ-ಅಂಶಗಳಿಗೋಸ್ಕರ

ಸುಳ್ಳು ಪ್ರಕರಣ ದಾಖಲಿಸಿದ್ದು, ಚಾಸಾ-1 ರವರಿಗೆ ಅನುಕೂಲವಾಗಲೆಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ** ಇರುವುದಿಲ್ಲ.

(**ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**)

**ಓ ಹೇ ಕೇ ಸಾ ಸ ಇ ಒ.,**

ಸಹಿ/-

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.,**

**ನಂಜನಗೂಡು.**